ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 28–02–2019

# ಪತ್ರಿಕಾ ಪ್ರಕಟಣೆ

## ಹೆಚ್1 ಎನ್1 ಜ್ವರ ವ್ಯಾಪಿಸದಂತೆ ಕ್ರಮ: ಡಾ. ಪ್ರಕಾಶ್

ಬೆಂಗಳೂರು, ಫೆ 28 (ಕರ್ನಾಟಕ ವಾರ್ತೆ)

ಹೆಚ್ 1 ಎನ್ 1 ಜ್ವರ ಬೆಂಗಳೂರು ನಗರ ಜಿಲ್ಲೆಯಲ್ಲಿ ವ್ಯಾಪಿಸದಂತೆ ಸಂಪೂರ್ಣ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ ಕೆ.ಎಸ್. ಪ್ರಕಾಶ್ ಅವರು ತಿಳಿಸಿದರು.

ಅವರು ಇಂದು ಈ ಕುರಿತು ಬೆಂಗಳೂರು ನಗರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಳ್ಳಲಾದ ಹೆಚ್1 ಎನ್1 ಸೋಂಕು ತಡೆ ಕುರಿತ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು.

ಸರ್ಕಾರಿ ಆಸ್ಪತ್ರೆಗಳಲ್ಲದೆ, ಖಾಸಗಿ ಆಸ್ಪತ್ರೆಗಳಲ್ಲೂ ಸಹ ಈ ಕಾಯಿಲೆ ಬಗ್ಗೆ ಅರವು ಮೂಡಿಸಿ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸುವಂತೆ ತಿಳಿಸಲಾಗಿದೆ. ಜಿಲ್ಲೆಯಲ್ಲಿ ಮಂಗನ ಕಾಯಿಲೆ ನಿಯಂತ್ರಣದಲ್ಲಿದೆ. ಬಡವರಿಗೆ, ಬಿಪಿಎಲ್ ಕಾರ್ಡುದಾರರಿಗೆ ಆರೋಗ್ಯ ಸೇವೆಗಳು ಸಿಗಲೆಂದು ಹಾಗೂ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸಲು ಮಾರ್ಚ್ 3, 5 ಹಾಗೂ 7 ರಂದು ಬೃಹತ್ ಆರೋಗ್ಯ ಮೇಳವನ್ನು ಹಮ್ಮಿಕೊಳ್ಳಲಾಗಿದೆ. ಬಸವನಗುಡಿ, ಸರ್ ಸಿ.ವಿ. ರಾಮನ್ ನಗರ ಹಾಗೂ ದಾಸರಹಳ್ಳಿಯಲ್ಲಿ ಆರೋಗ್ಯ ಮೇಳ ನಡೆಯಲಿದೆ ಎಂದರು.

ಮಾರ್ಚ್ 10 ರಂದು ರಾಜ್ಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಲಸಿಕೆಯನ್ನು ಹಾಕಲಾಗುದವುದು. ಈ ನಿಟ್ಟಿನಲ್ಲಿ ನಗರ ಜಿಲ್ಲೆ ಸಹ ಸಿದ್ಧತೆಗಳನ್ನು ಮಾಡಿಕೊಂಡಿದೆ ಎಂದರು

ಕಾರ್ಯಕ್ರಮದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ ಪಿ.ಕೆ. ಸುನಂದಾ ಮಾತನಾಡಿ 2019 ರ ಜನವರಿಯಿಂದ ಇಲ್ಲಿಯವರೆಗೆ 39 ಹೆಚ್1 ಎನ್1 ಪ್ರಕರಣಗಳು ದಾಖಲಾಗಿದೆ. 2018 ರಲ್ಲಿ 64

ಪ್ರಕರಣಗಳು ದಾಖಲಾಗಿ 4 ಸಾವುಗಳು ಸಂಭವಿಸಿತ್ತು. ಬೆಂಗಳೂರು ನಗರ ಜಿಲ್ಲೆಯಲ್ಲಿ 6 ಡೆಂಗ್ಯೂ ಹಾಗೂ 7 ಚಿಕುನ್‌ಗುನ್ಯ ಪ್ರಕರಣಗಳು ದಾಖಲಾಗಿವೆ ಎಂದರು.

ಈ ಕಾಯಿಲೆ ತಡೆಯಲು ಲಾರ್ವಾ ಸರ್ವೇ ಮಾಡಲಾಗುತ್ತಿದೆ. ಹೆಚ್1 ಎನ್1 ಜ್ವರ ಗಾಳಿಯಿಂದ ಹರಡುವ ಜ್ವರವಾಗಿದ್ದು, 2 ರಿಂದ 8 ಗಂಟೆಯ ಕಾಲ ಈ ವೈರಾಣು ಜೀವಂತವಾಗಿರುತ್ತದೆ. ಮೊದಲ ಹಂತದಲ್ಲಿ ರೋಗಿಗೆ ಜ್ವರ ಹಾಗೂ ಕೆಮ್ಮು ಕಾಣಿಸಿಕೊಳ್ಳಲಿದ್ದು, ಎರಡನೇ ಹಂತದಲ್ಲಿ ಅತಿ ಜ್ವರ ಹಾಗೂ ಗಂಟಲುಕೆರೆತ ಉಂಟಾಗುತ್ತದೆ. ಕೊನೆಯ ಹಂತವಾಗಿ ಉಸಿರಾಟ ಸಮಸ್ಯೆ ಕಾಣಿಸಿಕೊಳ್ಳಲಿದೆ ಎಂದರು.

ಈ ಹೆಚ್1 ಎನ್1 ಪ್ರಕರಣ ವಲಸಿಗರಲ್ಲಿ ಹೆಚ್ಚು ಕಾಣುತ್ತಿದೆ. ಜಿಲ್ಲೆಯ 12 ಸರ್ಕಾರಿ ವೈದ್ಯಕೀಯ ಕಾಲೇಜು, ಖಾಸಗಿ ಕಾಲೇಜುಗಳು ಸೇರಿದಂತೆ ಒಟ್ಟು 1658 ವೈದ್ಯರಿಗೆ ಈ ಕಾಯಿಲೆಗಳ ಬಗ್ಗೆ ಸಭೆಗಳ ಮೂಲಕ ಅರಿವು ಮೂಡಿಸಲಾಗಿದೆ. ಜನರು ಸ್ವಚ್ಛತೆಯ ಬಗ್ಗೆ ಹೆಚ್ಚು ಗಮನ ಕೊಡಬೇಕು. ಅಲ್ಲದೆ, ಪೌಷ್ಠಿಕ ಆಹಾರ ಸೇವಿಸಿ ದೇಹದಲ್ಲಿ ರೋಗ ನಿರೋಧಕ ಶಕ್ತಿಯನ್ನು ಬೆಳಸಿಕೊಳ್ಳಬೇಕು. ಜಿಲ್ಲೆಯಲ್ಲಿ ಮಂಗನ ಕಾಯಿಲೆ ನಿಯಂತ್ರಣದಲ್ಲಿದ್ದು ಯಾವುದೇ ಪ್ರಕರಣ ದಾಖಲಾಗಿರುವುದಿಲ್ಲ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಆರ್.ಸಿ.ಎಚ್ ಅಧಿಕಾರಿಗಳಾದ ಡಾ. ಮಹೇಶ್ ಅವರು ಸಹ ಉಪಸಿತ್ಥರಿದ್ದರು.

# Passport Seva Kendra

Bengaluru February 28 (Karnataka Information)

It is hereby notified for the information of general public and customers of post office that, a Passport Seva Kendra (POPSK) under Ministry of External Affairs, Government of India is being inaugurated on 5th March 2019 at Jalahalli Head Post Office, opposite to BEL Kalyana Mantap.

It is a privilege that, this Seva Kendra is being dedicated to the Nation for the benefit of all the citizens residing in this area, especially for the valued workforce of esteemed BEL Company.

D.V. Sadananda Gowda, Central Minister of Statistics and Programme Implementation, Government of India will be inaugurating the POPSK at Jalahalli HPO in the presence of Krishna ByreGowda,

Minister of Rural Development, Law and Parliamentary Affairs, Government of Karnataka along with VVIPs.

## ಎಸಿಬಿ ದಾಳಿ

ಬೆಂಗಳೂರು, ಫೆಬ್ರವರಿ (ಕರ್ನಾಟಕ ವಾರ್ತೆ)

ತುಮಕೂರು ಜಿಲ್ಲೆ, ಗುಬ್ಬಿ ತಾಲ್ಲೂಕು, ನಿಟ್ಟೂರು ಹೋಬಳಿ ಹೊನ್ನೇನಹಳ್ಳಿ ಗ್ರಾಮದ ನಿವಾಸಿಯೊಬ್ಬರ ಜಮೀನಿನ ಬೆಳೆ ಸಾಲ ರೂ.50,000/- ದೊಡ್ಡಗುಣಿ ಪ್ರಾಥಮಿಕ ಕೃಷಿ, ಪತ್ತಿನ ಸಹಕಾರ ಸಂಘ (ನಿ) ವತಿಯಿಂದ ಮಂಜೂರಾಗಿರುತ್ತದೆ. ಶ್ರೀ.ಓಂಕಾರಮೂರ್ತಿ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಾಥಮಿಕ ಕೃಷಿ, ಪತ್ತಿನ ಸಹಕಾರ ಸಂಘ (ನಿ) ದೊಡ್ಡಗುಣಿ ರವರು ಮಂಜೂರಾಗಿರುವ ರೂ.50,000/- ಸಾಲದ ಹಣವನ್ನು ದೂರುದಾರರ ಖಾತೆಗೆ ಜಮಾ ಮಾಡಲು ರೂ.5,000/- ಲಂಚದ ಹಣಕ್ಕಾಗಿ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:28/02/2019 ರಂದು ಶ್ರೀ.ಓಂಕಾರಮೂರ್ತಿ ರವರು ದೂರುದಾರರಿಂದ ರೂ.5,000/- ಲಂಚದ ಹಣವನ್ನು ಪಡೆಯುತ್ತಿದ್ದಾಗ ತುಮಕೂರು ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳಿಗೆ ಸಿಕ್ಕಿಬಿದ್ದಿರುತ್ತಾರೆ. ಆರೋಪಿತರನ್ನು ದಸ್ತಗಿರಿ ಮಾಡಿ, ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ, ತನಿಖೆ ಮುಂದುವರೆದಿದೆ ಎಂದು ಪ್ರಕಟಣೆ ತಿಳಿಸಿದೆ.

## ಸೇವೆ ಸಂತೃಪ್ತಿ ತಂದಿದೆ: ಎಂ. ರವಿಕುಮಾರ್

ಬೆಂಗಳೂರು, ಫೆಬ್ರವರಿ (ಕರ್ನಾಟಕ ವಾರ್ತೆ)

ತಾವು ವ್ಯಾಸಂಗ ಮಾಡುತ್ತಿದ್ದ ಶಿಕ್ಷಣ ಸಂಸ್ಥೆಯಲ್ಲಿಯೇ ಶಿಕ್ಷಕನಾಗಿ ಹಾಗೂ ತಾವು ಸೇರಿದ ಇಲಾಖೆಯಲ್ಲಿಯೇ ಮುಖ್ಯಸ್ಥನಾಗಿ ಸೇವೆ ಸಲ್ಲಿಸಿ ನಿವೃತ್ತಿಯಾಗುತ್ತಿರುವುದು ತಮಗೆ ಸಂತೃಪ್ತಿ ತಂದಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎಂ. ರವಿಕುಮಾರ್ ಅವರು ಇಲ್ಲಿ ಇಂದು ತಿಳಿಸಿದರು.

ತಮ್ಮ ನಿವೃತ್ತಿಯ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಾಲ ಸಹಕಾರ ಸಂಘ ಆಯೋಜಿಸಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿದ ನಂತರ ಅವರು ಮಾತನಾಡುತ್ತಿದ್ದರು.

ಇಲಾಖೆಯ ವಿವಿಧ ಶಾಖೆಗಳಲ್ಲಿನ ವೈವಿಧ್ಯ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಿದ ತೃಪ್ತಿ ತಮ್ಮಲ್ಲಿದೆ. ಮೂರೇ ತಿಂಗಳು ನಿರ್ದೇಶಕನಾಗಿ ಸೇವೆ ಸಲ್ಲಿಸಿದ್ದರೂ ಈ ಅವಧಿಯಲ್ಲಿ ತಮಗೆ ಲಭಿಸಿದ ಸವಾಲುಗಳನ್ನು ಸಮರ್ಥವಾಗಿ ನಿಭಾಯಿಸಿದ್ದು ತಮಗೆ ನೆಮ್ಮದಿ ತಂದಿದೆ ಎಂದು ರವಿಕುಮಾರ್ ಅವರು ತಮ್ಮ ಮನಬಿಚ್ಚಿ ಮಾತನಾಡಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷ ಎಂ. ಸಿದ್ದರಾಜು ಅವರು ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

ಈ ಮುನ್ನ ಮಾತನಾಡಿದ ಇಲಾಖೆಯ ಜಂಟಿ ನಿರ್ದೇಶಕರಾದ ಎನ್. ಭೃಂಗೀಶ್ ಮತ್ತು ಎ. ಆರ್. ಪ್ರಕಾಶ್ ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿ ಹೆಚ್. ಬಿ. ದಿನೇಶ್ ಮತ್ತಿತರರು ರವಿಕುಮಾರ್ ಅವರ ಸ್ನೇಹಮಯಿ ವ್ಯಕ್ತಿತ್ವವನ್ನು ಗುಣಗಾನ ಮಾಡಿದರು.

## ಅಧಿಕಾರ ಸ್ವೀಕಾರ

ಬೆಂಗಳೂರು, ಫೆಬ್ರವರಿ (ಕರ್ನಾಟಕ ವಾರ್ತೆ)

ಡಾ: ಕೆ. ಅನ್ನದಾನಿ ಶಾಸಕರು, ಮಳವಳ್ಳಿ ವಿಧಾನ ಸಭಾ ಕ್ಷೇತ್ರ ಇವರು ಮಾರ್ಚ್ 1 ರಂದು ಬೆಳಿಗ್ಗೆ 10.00 ಗಂಟೆಗೆ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ನಿಗಮದ ಕೇಂದ್ರ ಕಚೇರಿ ಸಂಖ್ಯೆ 16– ಡಿ, 4 ನೇ ಮಹಡಿ, ಡಿ. ದೇವರಾಜ ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬಂಡ್ ರಸ್ತೆ, ಬೆಂಗಳೂರು –52 ಇಲ್ಲಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ.

**ಬೆಂಗಳೂರು ಜಲಮಂಡಲಿ: ಮಾರ್ಚ್ 01 ರಂದು ಸಕಾನಿಅ(ಪೂರ್ವ–1) ಉಪವಿಭಾಗದಲ್ಲಿ**

**ನೀರಿನ ಅದಾಲತ್**

ಬೆಂಗಳೂರು ಜಲಮಂಡಲಿಯ ಸಕಾನಿಅ(ಪೂರ್ವ-1) ಉಪವಿಭಾಗದಲ್ಲಿ ದಿ:01.03.2019 ರಂದು ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ನೀರಿನ ಅದಾಲತ್‌ಅನ್ನು ಬೆಳಗ್ಗೆ 9.30 ರಿಂದ 11:00 ಗಂಟೆಯವರೆಗೆ ನಡೆಸಲಾಗುತ್ತದೆ.

ದಿನಾಂಕ: 01.03.2019 ರಂದು ಸಕಾನಿಅ(ಪೂರ್ವ-1) ಉಪವಿಭಾಗ ವ್ಯಾಪ್ತಿಗೆ ಬರುವ ಹೆಚ್.ಆರ್.ಬಿ.ಆರ್ ಲೇಔಟ್, ಕಲ್ಯಾಣ ನಗರ, ಓ.ಎಂ.ಬಿ.ಆರ್ ಲೇಔಟ್, ಮತ್ತು ಹೆಚ್.ಬಿ.ಆರ್ ಲೇಔಟ್ ಸೇವಾಠಾಣೆಗಳಿಗೆ ಸಂಬಂಧಿಸಿದ ವಿವಾದಗಳನ್ನು 1ನೇ ಬ್ಲಾಕ್, ಹೆಚ್.ಆರ್.ಬಿ.ಆರ್ ಲೇಔಟ್, ಕಲ್ಯಾಣ ನಗರ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಚೇರಿಯಲ್ಲಿ ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: ಕಾರ್ಯನಿರ್ವಾಹಕ ಅಭಿಯಂತರರು (ಪೂರ್ವ): 22945158. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಪೂರ್ವ-1) ಉಪವಿಭಾಗ: 22945170.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರುನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ:22238888, ಸಹಾಯವಾಣಿ 1916 ಹಾಗೂ ವಾಟ್ಸ್‌ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ.

## BWSSB: Water Adalath in AEE(East-1) sub division on March 1st

BWSSB water Adalath is held on 01.03.2019 in AEE(East-1) sub division from 9:30.am to 11.00 am to settle the grievances concerned with the water billing, delay in providing water supply & sanitary connections, delay in converting from domestic connection to non domestic connection & other related issues.

The disputes of consumers of HRBR Layout, Kalyan Nagar, OMBR Layout, & HBR layout, service station coming under AEE(East-1) sub division, will be discussed in detail & problems will be settled in the office of the Assistant Executive Engineer (East-1) sub division, 1st Block, HRBR Layout, Kalyan Nagar.

Details regarding the adalath can be obtained by the office of EE(East): 22945158, or office of AEE (East-1): 22945170.

For any problems regarding the water supply and all, publics can contact 24x7 call centre: 22238888 helpline number:1916 & whats app no: 8762228888.